## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜು ತುಮಕೂರು ಟೌನ್ ಸಿದಾರ್ಥನಗರ, ತುಮಕೂರು ಜಿಲ್ಲೆ, ಇಲ್ಲಿನ ಬಾಡಿಗೆ ಕಟ್ಟಡಕ್ಕೆ ಪರಿಷ್ಕೃತ ಬಾಡಿಗೆ ಕುರಿತು.

ಓದಲಾಗಿದೆ:- 1. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಸಕಇ 133 ಮೊದೇಶಾ 2011, ದಿನಾಂಕ:07-04-2012

2. ಪತ್ರ ಸಂಖ್ಯೆ:ಕವಶಿಸಸ/ಸಿಆರ್(ಶಿ)-216/2009-10, ದಿನಾಂಕ:25.09.2013.

*****

<u>ಪ್ರಸ್ತಾವನೆ:</u>

ಮೇಲೆ ಓದಲಾದ(1)ರ ಆದೇಶದಲ್ಲಿ ತುಮಕೂರು ಜಿಲ್ಲೆ ಗೊಲ್ಲಹಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ಪರಿಶಿಷ್ಟ ಜಾತಿಯ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗೆ ಸ್ವಂತ ಕಟ್ಟಡ ಲಭ್ಯವಿಲ್ಲದ ಕಾರಣ ತುಮಕೂರು ನಗರ ನಿವಾಸಿಯಾದ ಶ್ರೀ ಶ್ರೇಯಾಂಶುಕುಮಾರ್, ಇವರ ಸ್ವಂತ ಕಟ್ಟಡದಲ್ಲಿ ಸದರಿ ವಸತಿ ಕಾಲೇಜುನ್ನು ನಡೆಸಲಾಗುತ್ತಿದ್ದು, ಈ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ರೂ.76.900/-ಗಳನ್ನು ನಿಗಧಿಪಡಿಸಿದಂತೆ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ(2)ರ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು, ಇವರು ತಮ್ಮ ಪ್ರಸ್ತಾವನೆಯಲ್ಲಿ ಮೊರಾರ್ಜಿ ದೇಸಾಯಿ ವಿಜ್ಞಾನ ಪದವಿ ಪೂರ್ವ ಕಾಲೇಜಿಗೆ ಲೋಕೋಪಯೋಗಿ ಇಲಾಖೆ, ತುಮಕೂರು, ಇವರು 2013-14ನೇ ಸಾಲಿನಿಂದ ಸದರಿ ಬಾಡಿಗೆಯನ್ನು ಪರಿಷ್ಕರಿಸಿ, ಮಾಸಿಕ ಬಾಡಿಗೆಯನ್ನು ರೂ.94.000/-ಗಳಿಗೆ ನಿಗಧಿಪಡಿಸಿ, ದಿನಾಂಕ:14-05-2013ರಿಂದ ಅನ್ವಯವಾಗುವಂತೆ ಕಟ್ಟಡ ಮಾಲೀಕರಿಗೆ ಪಾವತಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

**ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.**

**<u>ಸರ್ಕಾರಿ ಆದೇಶ ಸಂಖ್ಯೆ:ಸಕಇ 205 ಮೋದೇಶಾ 2013 ಬೆಂಗಳೂರು,</u>**

**<u>ದಿನಾಂಕ:10-12-2013,</u>**

ತುಮಕೂರು ನಗರ ನಿವಾಸಿಯಾದ ಶ್ರೀ ಶ್ರೇಯಾಂಶುಕುಮಾರ್, ಇವರ ಮಾಲೀಕತ್ವದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು 2013-14ನೇ ಸಾಲಿನಿಂದ ಸದರಿ ಬಾಡಿಗೆಯನ್ನು ಪರಿಷ್ಕರಿಸಿ, ಮಾಹೆಯಾನ ನಿಗಧಿಪಡಿಸಿದ ರೂ.94,000/-(ತೊಂಬತ್ತು ನಾಲ್ಕು ಸಾವಿರದ ರೂಪಾಯಿಗಳು ಮಾತ್ರ)ಗಳಂತೆ ಬಾಡಿಗೆಯನ್ನು ದಿನಾಂಕ:14-05-2013ರಿಂದ ಅನ್ವಯಿಸುವಂತೆ ಹಾಗೂ ಆದಾಯ ತೆರಿಗೆಯನ್ನು **TDS** ಮುಖಾಂತರ ಶೇ.10ರಷ್ಟು ಮೊತ್ತ ಕಡಿತಗೊಳಿಸಿ, ಕೇಂದ್ರ ಸರ್ಕಾರದ ಲೆಕ್ಕಕ್ಕೆ ಜಮೆಗೊಳಿಸುವ ಷರತ್ತಿನೊಂದಿಗೆ ಕಟ್ಟಡದ ಮಾಲೀಕರಿಗೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ:ಸಕಕಾ 241 ಅಂಅಸ 2013, ದಿನಾಂಕ:19-11-2013ರಲ್ಲಿ ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 1996, ದಿನಾಂಕ:10-07-1996ರಲ್ಲಿ ಸರ್ಕಾರದ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ವಿ. ರತ್ನಮ್ಮ 10/12
(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ.
3. ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ,ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು ಜಿಲ್ಲೆ.
6. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ತುಮಕೂರು ಜಿಲ್ಲೆ.
7. ಜಿಲ್ಲಾ ಖಜಾನಾಧಿಕಾರಿಗಳು, ತುಮಕೂರು ಜಿಲ್ಲೆ.
8. ಶ್ರೀ ಶ್ರೇಯಾಂಶು ಕುಮಾರ್, ಶ್ರೀನಿವಾಸ ನಿಲಯ, ರೈಲ್ವೆ ನಿಲ್ದಾಣ ರಸ್ತೆ, ತುಮಕೂರು.
9. ~~ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.~~